# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ : M/s SRK Energy Private Limited ರವರಿಗೆ ಗದಗ ಜಿಲ್ಲೆ, ಗದಗ ತಾಲ್ಲೂಕಿನ ವಿವಿಧ ಗ್ರಾಮಗಳಲ್ಲಿ 10 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಹಂಚಿಕೆ ಮಾಡುವ ಕುರಿತು.

ಸಂ. 643 ದಿನಾಂಕ 17/3/22 ಬೆಂಗಳೂರು

ಓದಲಾಗಿದೆ : 1) ಸರ್ಕಾರದ ದಿನಾಂಕ:18.07.2016 ರ ಹಂಚಿಕೆ ಸಮಿತಿ ಸಭೆ.

2) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ರವರ ಪತ್ರ ಸಂಖ್ಯೆ:KRED/08/SRKEPL-10 MW/ Betigeri/Gadag/2017/4414, ದಿನಾಂಕ:22.06.2017

**ಪ್ರಸ್ತಾವನೆ :-**

ಮೇಲೆ ಓದಲಾದ (1)ರ ಹಂಚಿಕೆ ಸಮಿತಿ ಸಭೆಯಲ್ಲಿ ಕೆ.ಆರ್.ಇ.ಡಿ.ಎಲ್. ರವರು ಸರ್ಕಾರಕ್ಕೆ ಸಲ್ಲಿಸಿರುವ ಪ್ರಸ್ತಾವನೆಯ ಹಿನ್ನೆಲೆಯಲ್ಲಿ M/s SRK Energy Private Limited ಕಂಪನಿಯವರು ಗದಗ ಜಿಲ್ಲೆ, ಗದಗ ತಾಲ್ಲೂಕಿನ ಹಟ್ಟಲಗೇರಿ ಮತ್ತು ಸಾಂಬಪುರ ಗ್ರಾಮಗಳಲ್ಲಿ 10 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಘಟಕ ಸ್ಥಾಪಿಸುವ ಪ್ರಸ್ತಾವನೆಗೆ ಸಮಿತಿಯು ಸದರಿ ಕಂಪನಿಯವರು ಸ್ಥಾಪಿಸಲು ಉದ್ದೇಶಿಸಿರುವ ಸ್ಥಳವು ಖಾಸಗಿ ಜಮೀನಾಗಿದ್ದು, ಸದರಿ ಸ್ಥಳದಲ್ಲಿ 10 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಘಟಕ ಸ್ಥಾಪಿಸುವ ಪ್ರಸ್ತಾವನೆಗೆ ಎರಡು ವರ್ಷದಲ್ಲಿ ವಾಸ್ತವಿಕ ಸಾಮರ್ಥ್ಯಕ್ಕೆ ವಿಸ್ತೃತ ಯೋಜನಾ ವರದಿಯನ್ನು ತಯಾರಿಸಿ ಕ್ರೆಡಲ್‌ಗೆ ಸಲ್ಲಿಸಬೇಕೆಂಬ ಷರತ್ತಿಗೊಳಪಟ್ಟು ಸಮಿತಿಯು ಸರ್ವಾನುಮತದಿಂದ ತಾತ್ವಿಕ ಅನುಮೋದನೆ ನೀಡಲು ಶಿಫಾರಸ್ಸು ಮಾಡಿರುತ್ತದೆ.

ಮೇಲೆ ಓದಲಾದ (2)ರ ಪತ್ರದಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಕೆ.ಆರ್.ಇ.ಡಿ.ಎಲ್. ಇವರು ಸರ್ಕಾರಕ್ಕೆ ಸಲ್ಲಿಸಿರುವ ಪ್ರಸ್ತಾವನೆಯಲ್ಲಿ M/s SRK Energy Private Limited ರವರು ಗದಗ ಜಿಲ್ಲೆ, ಗದಗ ತಾಲ್ಲೂಕಿನ ಹಟ್ಟಲಗೇರಿ ಮತ್ತು ಸಾಂಬಪುರ ಗ್ರಾಮಗಳಲ್ಲಿ ತತ್ವಶ: ಅನುಮೋದನೆಗೆ ಕೋರಿದ್ದ 10 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯ ಬದಲಿಗೆ ಹಂಚಿಕೆ ಆದೇಶವನ್ನು ನೀಡಬೇಕೆಂದು ಕೋರಿ ಡಿಪಿಆರ್ ನ್ನು ಸಲ್ಲಿಸಿರುವುದಾಗಿ ಹಾಗೂ ಡಿಪಿಆರ್ ಶುಲ್ಕವನ್ನು ಪಾವತಿಸಿಕೊಂಡು ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ಕೆ.ಇ.ಆರ್.ಸಿ.ಯು ದಿನಾಂಕ:08.02.2022ರ ಆದೇಶದಲ್ಲಿ ನವೀಕರಿಸಬಹುದಾದ ಇಂಧನ ಯೋಜನೆಗಳಿಗೆ ಬ್ಯಾಂಕಿಂಗ್ ಸೌಲಭ್ಯವನ್ನು ಒಂದು ವರ್ಷದ ಅವಧಿಗೆ ನೀಡುವ ವಿಷಯದಲ್ಲಿ ಮಾನ್ಯ ಉಚ್ಚ ನ್ಯಾಯಾಲಯದ ರಿಟ್ ಅರ್ಜಿ ಸಂಖ್ಯೆ:1061/2019 ಹಾಗೂ ಮಾನ್ಯ ಸರ್ವೋಚ್ಚ ನ್ಯಾಯಾಲಯದ ಸಿವಿಲ್ ಅಪೀಲ್ ಸಂಖ್ಯೆ:9619-9637/2019ರಲ್ಲಿ ಮಾನ್ಯ ನ್ಯಾಯಾಲಯಗಳು ನೀಡುವ ಅಂತಿಮ ಆದೇಶಗಳಿಗೊಳಪಟ್ಟು ದಿನಾಂಕ:31.07.2022ರವರೆಗೆ ವಿಸ್ತರಿಸಿ ಆದೇಶಿಸಿರುತ್ತದೆ.

ಪ್ರಸ್ತಾವನೆಯನ್ನು ಪರಿಶೀಲಿಸಿ, ಸರ್ಕಾರದ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಎನರ್ಜಿ 308 ಎನ್‌ಸಿಇ 2021**
**ಬೆಂಗಳೂರು, ದಿನಾಂಕ :14/03/2022**

MD KREDL

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, M/s SRK Energy Private Limited ಕಂಪನಿಯವರಿಗೆ ಗದಗ ಜಿಲ್ಲೆ, ಗದಗ ತಾಲ್ಲೂಕಿನ ಹಟ್ಟಲಗೇರಿ ಮತ್ತು ಸಾಂಬಪುರ ಗ್ರಾಮಗಳಲ್ಲಿ 10 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಹಂಚಿಕೆ ಮಾಡಿ ಆದೇಶಿಸಿದೆ.

AGMW

GM (Tech) KREDL

**ಷರತ್ತುಗಳು:-**

1. ಈ ಆದೇಶ ಹೊರಡಿಸಿದ ದಿನಾಂಕದಿಂದ 45 ದಿನಗಳ ಒಳಗಾಗಿ ಸರ್ಕಾರದ ಆದೇಶ ಸಂಖ್ಯೆ:ಇಎನ್ 435 ಎನ್‌ಸಿಇ 2011, ದಿನಾಂಕ :06.1.2012ರನ್ವಯ ಅಭಿವೃದ್ಧಿದಾರರು ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದೊಂದಿಗೆ ನಿಯಮಾನುಸಾರ ಒಡಂಬಡಿಕೆ ಮಾಡಿಕೊಳ್ಳತಕ್ಕದ್ದು.

Wind Section
Inward No. 257
Date 18.03.22
Sig

....2

2. ಅಭಿವೃದ್ಧಿದಾರರು ಈ ಯೋಜನೆಯನ್ನು ಸರ್ಕಾರದ ಆದೇಶ ಸಂಖ್ಯೆ:ಇಎನ್ 354 ಎನ್‌ಸಿಇ 2008, ದಿನಾಂಕ:19.01.2010 ಹಾಗೂ ತಿದ್ದುಪಡಿ ಆದೇಶ ಸಂಖ್ಯೆ:ಇಎನ್ 07 ಎನ್‌ಸಿಇ 2011, ದಿನಾಂಕ:18.07.2011ರಲ್ಲಿ ನಿಗದಿಪಡಿಸಿರುವ ಅವಧಿಯೊಳಗಾಗಿ ಅನುಷ್ಠಾನಗೊಳಿಸತಕ್ಕದ್ದು.
3. ಅಭಿವೃದ್ಧಿದಾರರು ತಾಂತ್ರಿಕ ಅವಶ್ಯಕತೆ ಮತ್ತು ಹೆಚ್ಚಿನ ವಿದ್ಯುತ್ ಉತ್ಪಾದನೆಯನ್ನು ಸೇಫ್‌ನಕ್ಷೆ ಮತ್ತು ವಿಂಡ್ ಫಾರ್ಮನ ಲೇಔಟ್‌ನ ಬದಲಾವಣೆಗನುಗುಣವಾಗಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ಶಿಫಾರಸ್ಸಿನಂತೆ ಇದೆ ಎಂಬುದನ್ನು ಖಾತರಿಪಡಿಸಬೇಕು.
4. ಮೈಲುಗಲ್ಲುಗಳನ್ನು ತೋರಿಸುವ ಸ್ಪಷ್ಟ ನಕ್ಷೆಯನ್ನು ತಯಾರಿಸಿ ಮೇಲುಸ್ತುವಾರಿಗಾಗಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತಕ್ಕೆ ಸಲ್ಲಿಸಬೇಕು.
5. ಎಲ್ಲೆಲ್ಲಿ ಶಾಸನಬದ್ಧ ಅನುಮೋದನೆ ಅವಶ್ಯಕತೆಯಿದೆಯೋ ಅಂದರೆ ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ/ಕಂದಾಯ ಇಲಾಖೆಗಳ ಮತ್ತು ಇತರ ಸಂಬಂಧಿತ ಇಲಾಖೆಗಳಿಂದ ಅನುಮೋದನೆಯನ್ನು ಹಂಚಿಕೆದಾರರು ಪಡೆದುಕೊಳ್ಳತಕ್ಕದ್ದು. ಅಭಿವೃದ್ಧಿದಾರರು ಈ ಯೋಜನೆಯನ್ನು ಖಾಸಗಿ ಜಮೀನಿನಲ್ಲಿ ಅನುಷ್ಠಾನಗೊಳಿಸುತ್ತಿದ್ದು, ಖಾಸಗಿ ಜಮೀನಿನ ಮಾಲೀಕರಿಂದ ಒಪ್ಪಿಗೆ ಪತ್ರವನ್ನು ಪಡೆಯತಕ್ಕದ್ದು.
6. ಅಭಿವೃದ್ಧಿದಾರರು ಈ ಯೋಜನೆಯಿಂದ ಉತ್ಪಾದಿಸುವ ವಿದ್ಯುತ್ತನ್ನು ಸ್ವಂತ ಬಳಕೆ/ ಮೂರನೇ ವ್ಯಕ್ತಿಗೆ ಮಾರಾಟ ಮಾಡಲು ಅನುಮತಿಸಲಾಗಿದೆ. ಈ ಕುರಿತು ಕೆ.ಪಿ.ಟಿ.ಸಿ.ಎಲ್/ ಎಸ್ಕಾಂನೊಂದಿಗೆ ವೀಲಿಂಗ್ ಮತ್ತು ಬ್ಯಾಂಕಿಂಗ್ ಒಡಂಬಡಿಕೆ ಮಾಡಿಕೊಳ್ಳಲು ಅನುಮತಿಸಲಾಗಿದೆ.
7. ಯೋಜನೆಯನ್ನು ತ್ವರಿತವಾಗಿ ಅನುಷ್ಠಾನ ಮಾಡಲು ಅನುವಾಗುವಂತೆ ರಾಜ್ಯ ಮತ್ತು ಜಿಲ್ಲಾ ಮಟ್ಟದ ಸರ್ಕಾರಿ ಅಧಿಕಾರಿಗಳು ಸಹಕರಿಸುವುದು.
8. ಸದರಿ ಪವನ ವಿದ್ಯುತ್ ಯೋಜನೆಗಾಗಿ ಇಂಧನ ಇಲಾಖೆಯಿಂದ ಜಮೀನನ್ನು ಹಂಚಿಕೆ ಮಾಡಲಾಗುವುದಿಲ್ಲ ಹಾಗೂ ಈ ಹಂಚಿಕೆ ಆದೇಶವು ಪವನ ವಿದ್ಯುತ್ ಯೋಜನೆಯ ಸಾಮರ್ಥ್ಯದ ಹಂಚಿಕೆಗೆ ಮಾತ್ರ ಸೀಮಿತವಾಗಿದೆ ಹಾಗೂ ಅಭಿವೃದ್ಧಿದಾರರಿಗೆ ಯೋಜನೆಯ ಜಾಗದಲ್ಲಿಯ ಖನಿಜ ಸಂಪತ್ತು ಹಾಗೂ ಭೂಮಿಯ ಬಗ್ಗೆ ಯಾವುದೇ ಹಕ್ಕು ಇರುವುದಿಲ್ಲ ಎಂಬುದನ್ನು ಮನಗಾಣತಕ್ಕದ್ದು.
9. ಸದರಿ ಕಂಪನಿಯವರು ಯೋಜನೆಗೆ ಸಂಬಂಧಿಸಿದಂತೆ ಬಾಕಿ ಇರುವ ಡಿಪಿಆರ್ ಮೊತ್ತ ಹಾಗೂ ಇನ್ನಿತರೆ ಶುಲ್ಕಗಳನ್ನು ಒಡಂಬಡಿಕೆ ಮಾಡಿಕೊಳ್ಳುವ ಮುನ್ನ ಕೆ.ಆರ್.ಇ.ಡಿ.ಎಲ್.ಗೆ ಸಂದಾಯ ಮಾಡತಕ್ಕದ್ದು.
10. ಕರ್ನಾಟಕ ಭೂಸುಧಾರಣಾ ಕಾಯ್ದೆ 1961 ಕಲಂ 109 ರಡಿ ಕಂದಾಯ ಇಲಾಖೆಯಿಂದ ಅನುಮತಿ ಪಡೆದುಕೊಂಡು ಭೂ ಪರಿವರ್ತನೆಯಾದ ನಂತರವೇ ಕೃಷಿ ಜಮೀನನ್ನು ಕೃಷಿಯೇತರ ಉದ್ದೇಶಕ್ಕಾಗಿ ಬಳಕೆ ಮಾಡಿಕೊಳ್ಳತಕ್ಕದ್ದು.
11. ಈ ಯೋಜನೆಗೆ ಸರ್ಕಾರದ ಕೈಗಾರಿಕಾ ನೀತಿ 2014-19ರನ್ವಯ ಅನ್ವಯಿಸುವ ಸವಲತ್ತುಗಳು ಲಭ್ಯವಾಗುತ್ತವೆ.

ಈ ಆದೇಶವನ್ನು ರದ್ದು ಮಾಡುವ/ಮಾರ್ಪಾಡು ಮಾಡುವ ಅಧಿಕಾರವನ್ನು ಸರ್ಕಾರವು ಹೊಂದಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

N. mangalagowri 14/3/22
(ಎನ್.ಮಂಗಳಗೌರಿ)
ಸರ್ಕಾರದ ಅಧೀನ ಕಾರ್ಯದರ್ಶಿ,
ಇಂಧನ ಇಲಾಖೆ.

14/3/22

**ಇವರಿಗೆ:**

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ಕಾರ್ಯದರ್ಶಿಗಳು, ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ/ ಕಂದಾಯ ಇಲಾಖೆ/ಬಹುಮಹಡಿ ಕಟ್ಟಡ/ವಿಕಾಸಸೌಧ, ಬೆಂಗಳೂರು.